ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 12/6/2020

# ಜೂ.14ಕ್ಕೆ ಪದಗ್ರಹಣ ಇಲ್ಲ



**ಶೀಘ್ರ ಹೊಸ ದಿನಾಂಕ ಪ್ರಕಟ**

**ಬೆಂಗಳೂರು:** ಜೂನ್ 14ಕ್ಕೆ ನಿಗದಿಯಾಗಿದ್ದ ಪದಗ್ರಹಣ ಕಾರ್ಯಕ್ರಮ ಅಂದು ನಡೆಯುವುದಿಲ್ಲ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ತಿಳಿಸಿದ್ದಾರೆ. ಮುಖಂಡರೊಂದಿಗೆ ಸಮಾಲೋಚಿಸಿ ಶೀಘ್ರವೇ ಹೊಸ ದಿನಾಂಕ ಪ್ರಕಟಿಸುವುದಾಗಿಯೂ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು ಕಾರ್ಯಕ್ರಮಕ್ಕೆ ಅನುಮತಿ ನೀಡುವ ಕುರಿತಾಗಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಫೋನ್ ಕರೆ ಮಾಡಿ ತಿಳಿಸಿದ್ದಾರೆ. ಜತೆಗೆ ಮಾಧ್ಯಮಗಳಿಗೂ ಅಧಿಕೃತವಾಗಿ ಹೇಳಿಕೆ ನೀಡಿದ್ದಾರೆ ಎಂದರು.

ಪ್ರತಿಜ್ಞಾ ದಿನ ಕಾರ್ಯಕ್ರಮಕ್ಕೆ ಅನುಮತಿ ನೀಡಿ ಎಂದು ಅಧಿಕೃತವಾಗಿ ಪತ್ರ ಬರೆದಿದ್ದೆ. ಆದರೆ ಅಂದು ನೀಡಿರಲಿಲ್ಲ. ಇದೀಗ ಅನುಮತಿಯನ್ನು ನೀಡಿದ್ದಾರೆ. ಆದರೆ ಜೂನ್ 14 ರಂದು ಕಾರ್ಯಕ್ರಮ ಮಾಡಲು ಸಾಧ್ಯವಿಲ್ಲ ಎಂದರು.

ಪದಗ್ರಹಣ ಕಾರ್ಯಕ್ರಮ ಮಾಡೇ ಮಾಡುತ್ತೇವೆ. ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ಹಾಗೂ ಇತರ ಮುಖಂಡರ ಜೊತೆಗೆ ಮಾತುಕತೆ ನಡೆಸಿ ದಿನಾಂಕ ಪ್ರಕಟ ಮಾಡಲಾಗುವುದು. ಸರ್ಕಾರ ಕಾರ್ಯಕ್ರಮ ನಡೆಸಲು ಅನುಮತಿ ನೀಡಿದರೂ ಕೊರೊನಾ ಮಾರ್ಗಸೂಚಿ ಗಮನದಲ್ಲಿ ಇಟ್ಟುಕೊಂಡು ನಿರ್ಧಾರ ಕೈಗೊಳ್ಳಲಾಗುವುದು. ಕಾರ್ಯಕ್ರಮ ನಡೆಸಲು ಎಲ್ಲಾ ಜಿಲ್ಲೆಗಳಲ್ಲಿ ವ್ಯವಸ್ಥೆ ಮಾಡಬೇಕು. ಇದಕ್ಕೆ ಕಾಲಾವಕಾಶ ಬೇಕಾಗುತ್ತದೆಂದು ಡಿಕೆಶಿ ತಿಳಿಸಿದರು. ಕಾರ್ಯಕ್ರಮಕ್ಕೆ ಸಿಎಂ ಅನುಮತಿ ನೀಡಿದ ಮೇಲೆ ಇನ್ನೇನು ಬೇಕಾಗಿಲ್ಲ. ಅವರು ಮಾತು ಕೊಟ್ಟ ಮೇಲೆ ಮುಗಿದೋಯ್ತು. ಇದು ಕಾರ್ಯಕರ್ತರ ಕಾರ್ಯಕ್ರಮವಾಗಿದೆ. ಎಲ್ಲರಿಗೂ ಅನುಕೂಲವಾಗುವ ದಿನದಂದು ನಡೆಯುತ್ತದೆ ಎಂದು ಮಾಹಿತಿಯಿತ್ತರು.

## ಡಿಕೆಶಿ ಪದಗ್ರಹಣ ನಮ್ಮ ಅಭ್ಯಂತರವಿಲ್ಲ

**ಬೆಂಗಳೂರು:** ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಪದಗ್ರಹಣ ಕಾರ್ಯಕ್ರಮಕ್ಕೆ ಕೊನೆಗೂ ರಾಜ್ಯ ಸರ್ಕಾರ ಅನುಮತಿ ನೀಡಿದೆ.

ಗುರುವಾರ ವಿಧಾನಸೌಧದಲ್ಲಿ ಸುದ್ದಿಗಾರರ ಜತೆ ಮಾತನಾಡಿದ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಕಾಂಗ್ರೆಸ್ ಅಧ್ಯಕ್ಷರ ಪದಗ್ರಹಣ ಕಾರ್ಯಕ್ರಮ ನಡೆಸಲು ನಮ್ಮದೇನೂ ಅಭ್ಯಂತರವಿಲ್ಲ. ಈ ಬಗ್ಗೆ ದೂರವಾಣಿ ಮುಖೇನ ಶಿವಕುಮಾರ್ ಜತೆ ಮಾತನಾಡಿದ್ದೇನೆ. ಆದರೆ ಹೆಚ್ಚು ಜನರು ಸೇರಬಹುದೆಂಬ ಕಾರಣಕ್ಕೆ ಅನುಮತಿ ನೀಡಿರಲಿಲ್ಲ ಎಂದು ಸಿಎಂ ತಿಳಿಸಿದರು.



ಕೊವಿಡ್-19 ನಿರ್ಬಂಧದ ಹಿನ್ನೆಲೆಯಲ್ಲಿ ನಿಯಮ ಪಾಲನೆ ಅವಶ್ಯಕವಾಗಿದೆ. ಇದನ್ನು ಪಾಲಿಸಿಯೇ ಕಾರ್ಯಕ್ರಮ ನಡೆಸುವುದಾಗಿ ಅವರು ಭರವಸೆ ನೀಡಿರುವ ಕಾರಣಕ್ಕೆ ಪದಗ್ರಹಣ ಕಾರ್ಯಕ್ರಮ ನಡೆಸುವುದಕ್ಕೆ ನಮ್ಮದೇನೂ ಅಡ್ಡಿಯಿಲ್ಲ ಎಂದೂ ಸ್ಪಷ್ಟಪಡಿಸಿದರು.

## ನಾನೇನು ಮುಟ್ಠಾಳನಲ್ಲ

**ಬೆಂಗಳೂರು:** ಮಾಜಿ ಪ್ರಧಾನಿ ದೇವೇಗೌಡರು ನಮ್ಮ ಬೆಂಬಲದಿಂದ ರಾಜ್ಯಸಭೆಗೆ ಹೋಗುತ್ತಿದ್ದಾರೆ ಎಂದು ಹೇಳಲು ನಾನು ಮುಟ್ಠಾಳನಲ್ಲ ಎಂದು ಹೇಳುವ ಮೂಲಕ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಕುತೂಹಲ ಮೂಡಿಸಿದ್ದಾರೆ.

ರಾಜ್ಯಸಭೆಗೆ ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡರು ಸ್ಪರ್ಧೆ ನಡೆಸುತ್ತಿದ್ದು ಗೌಡರಿಗೆ ಕಾಂಗ್ರೆಸ್ ಹೈಕಮಾಂಡ್ ಬೆಂಬಲ ವಿಚಾರವಾಗಿ ಕಾಂಗ್ರೆಸ್ ನಾಯಕರ ಭಿನ್ನ ಹೇಳಿಕೆಗಳು ದ್ವಂದ್ವ ಸೃಷ್ಟಿಸುತ್ತಿದೆ. ದೇವೇಗೌಡ- ರಿಗೆ ರಾಜ್ಯಸಭೆಗೆ ಬೆಂಬಲ ವಿಚಾರವಾಗಿ ಪಕ್ಷದ ರಾಜ್ಯ ಮಟ್ಟದ ನಾಯಕರಲ್ಲಿ ಭಿನ್ನ ನಿಲುವಿದೆ. ಡಿಕೆ ಶಿವಕುಮಾರ್ ಬೆಂಬಲ ನೀಡಿದರೆ ಸಿದ್ದರಾಮಯ್ಯ ನಿಲುವು ಬೇರೆಯಾಗಿತ್ತು. ಆದರೆ ಎಚ್‌ಡಿ ದೇವೇಗೌಡರು ಹಾಗೂ ಕುಮಾರಸ್ವಾಮಿ ರಾಜ್ಯ ಕಾಂಗ್ರೆಸ್ ನಾಯಕರ ಜೊತೆಗೆ ಮಾತುಕತೆ ನಡೆಸದೆ ಹೈಕಮಾಂಡ್ ಮಟ್ಟದಲ್ಲಿ ಮಾತುಕತೆ ನಡೆಸಿದ್ದಾರೆ. ಇದು ರಾಜ್ಯ ಮುಖಂಡರಲ್ಲಿ ಇರುಸುಮುರುಸು ಉಂಟು ಮಾಡಿರುವುದು ನಿಸ್ಸಂಶಯ.

ಸುದ್ದಿಗಾರರ ಜತೆ ಮಾತನಾಡಿದ ಡಿಕೆಶಿ, ದೇವೇಗೌಡ- ರಿಗೆ ಅವರದೇ ಆದ ವ್ಯಕ್ತಿತ್ವ, ಅನುಭವ, ಹಿರಿತನವಿದೆ. ರಾಜ್ಯಸಭೆಗೆ ದೇವೇಗೌಡರನ್ನು ಬೆಂಬಲಿಸುವುದು ಪಕ್ಷದ ವರಿಷ್ಠರ ತೀರ್ಮಾನ.